# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 953 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 22.02.2024 |
| ಉತ್ತರಿಸುವ ಸಚಿವರು | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳಲ್ಲಿ ಎಷ್ಟು ಯಾತ್ರಿ ನಿವಾಸಗಳನ್ನು ನಿರ್ಮಾಣ ಮಾಡಲಾಗಿದೆ; ಅವುಗಳು ಯಾವುವು; ಪ್ರಸ್ತುತ ಅವು ಯಾವ ಹಂತದಲ್ಲಿವೆ; ಅದಕ್ಕಾಗಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ವಿವರ ನೀಡುವುದು) | ಬೀದರ್ ಜಿಲ್ಲೆಯಲ್ಲಿ 2018-19ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ಹುಮನಾಬಾದ ತಾಲ್ಲೂಕು ರಾಂಪುರ ಗ್ರಾಮದ ಶ್ರೀ ರಾಮಲಿಂಗೇಶ್ವರ ದೇವಸ್ಥಾನದ ಹತ್ತಿರ ಯಾತ್ರಿ ನಿವಾಸ ನಿರ್ಮಾಣ ಕಾಮಗಾರಿಯನ್ನು ರೂ.50.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಂಡಿದ್ದು, ಮೇಲ್ಛಾವಣಿ ಹಾಕಲಾಗಿದ್ದು, ಪ್ಲಾಸ್ಟರಿಂಗ್ ಕಾಮಗಾರಿ ಪ್ರಗತಿಯಲ್ಲಿದೆ. ಈ ಕಾಮಗಾರಿ ಕೈಗೊಳ್ಳಲು ರೂ.25.00 ಲಕ್ಷಗಳನ್ನು ಕೆ.ಆರ್.ಐ.ಡಿ.ಎಲ್. ಬೆಂಗಳೂರು ರವರಿಗೆ ಬಿಡುಗಡೆ ಮಾಡಲಾಗಿದೆ. |
| ಆ) | ವಿಶ್ವ ಪ್ರಸಿದ್ಧ ಕರೇಜ ಅಭಿವೃದ್ಧಿಗೆ ಮಂಜೂರಾದ ಹಣವನ್ನು ಯಾತ್ರಿ ನಿವಾಸದ ಅಭಿವೃದ್ಧಿಗೆ ಬಳಸಬಹುದೇ; ಬಳಸುವುದಾದಲ್ಲಿ ಯಾವ ಯಾತ್ರಿ ನಿವಾಸಕ್ಕೆ ಬಳಸಲಾಗಿದೆ; (ವಿವರವಾದ ಮಾಹಿತಿ ಒದಗಿಸುವುದು) | ಬೀದರ್ ಕರೇಜ ಅಭಿವೃದ್ಧಿ ಕಾಮಗಾರಿಗೆ ರೂ.50.00 ಲಕ್ಷಗಳನ್ನು ಕೆ.ಆರ್.ಐ.ಡಿ.ಎಲ್ ರವರಿಗೆ ಬಿಡುಗಡೆ ಮಾಡಲಾಗಿದ್ದು, ಬಿಡುಗಡೆ ಮಾಡಿರುವ ಈ ಅನುದಾನವನ್ನು ಪ್ರಸ್ತುತ ಯಾವುದೇ ಕಾಮಗಾರಿಗೆ ಬಳಸಿಕೊಂಡಿರುವುದಿಲ್ಲ.<br><br>ಇಲಾಖೆಯಿಂದ ಮಂಜೂರಾಗಿರುವ ಯಾವುದೇ ಕಾಮಗಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನವನ್ನು ವಿವಿಧ ಕಾರಣಗಳ ಹಿನ್ನಲೆಯಲ್ಲಿ ಅನುಷ್ಠಾನಗೊಳಿಸದೇ ಇದ್ದಾಗ, ಅಂತಹ ಕಾಮಗಾರಿಗೆ ಬಿಡುಗಡೆ ಮಾಡಿರುವ ಅನುದಾನವನ್ನು ಬೇರೊಂದು ಪ್ರಗತಿಯಲ್ಲಿರುವ ಕಾಮಗಾರಿಗೆ ಬಳಸಿಕೊಳ್ಳಲಾಗುವುದು. |
| ಇ) | ಬೀದರ್ ಜಿಲ್ಲೆಯಲ್ಲಿ ಕೇಂದ್ರ ಮತ್ತು ರಾಜ್ಯ ಪುರಾತತ್ವ ಇಲಾಖೆಯ ಯೋಜನೆ ಅಡಿಯಲ್ಲಿ ಇರುವ ಐತಿಹಾಸಿಕ ಸ್ಮಾರಕಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಮಾಡುವಲ್ಲಿ (ಕುಡಿಯುವ ನೀರು, ಶೌಚಾಲಯ, ವಿದ್ಯುತ್ ಚಾಲಿತ ವಾಹನಗಳು, ಗೈಡ್‌ಗಳ ತರಬೇತಿ ಇತ್ಯಾದಿ) ಸರ್ಕಾರ ಯಾವ ಕ್ರಮಕೈಗೊಂಡಿದೆ; (ವಿವರ ನೀಡುವುದು) | ಬೀದರ್ ಜಿಲ್ಲೆಯಲ್ಲಿ ಕೇಂದ್ರ ಮತ್ತು ರಾಜ್ಯ ಪುರಾತತ್ವ ಇಲಾಖೆಯಡಿ ಬರುವ ಐತಿಹಾಸಿಕ ಸ್ಮಾರಕಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಕೈಗೊಂಡಿರುವ ಮೂಲಸೌಕರ್ಯಗಳ ಅಭಿವೃದ್ಧಿ ಕಾಮಗಾರಿಗಳ ವಿವರವನ್ನು **ಅನುಬಂಧದಲ್ಲಿ** ಒದಗಿಸಲಾಗಿದೆ.<br><br>ಬೀದರ್ ಜಿಲ್ಲೆಯಲ್ಲಿ ಪ್ರವಾಸಿ ಮಾರ್ಗದರ್ಶಿ ತರಬೇತಿ ನೀಡುವ ಕುರಿತು ಇಲಾಖೆಗೆ ಈವರೆಗೂ ಯಾವುದೇ ಪ್ರಸ್ತಾವನೆಗಳು ಸ್ವೀಕೃತವಾಗಿರುವುದಿಲ್ಲ. |

| | | |
|---|---|---|
| **ಈ)** | ಜಲಸಂಗಿಯ ಪ್ರಸಿದ್ಧ ಕಲ್ಲೇಶ್ವರ ದೇವಾಲಯದ ಸಂರಕ್ಷಣೆ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು? | ಬಂದಿದೆ.<br>ಜಲಸಂಗಿಯ ಪ್ರಸಿದ್ಧ ಕಲ್ಲೇಶ್ವರ ದೇವಾಲಯವು ರಾಜ್ಯ ಸಂರಕ್ಷಿತ ಸ್ಮಾರಕವಾಗಿದ್ದು, ಅನುದಾನದ ಲಭ್ಯತೆಯ ಅನುಸಾರ ಸದರಿ ದೇವಾಲಯದ ಸಂರಕ್ಷಣೆ ಮಾಡುವ ಬಗ್ಗೆ ಪರಿಶೀಲಿಸಲಾಗುವುದು. |

TOR 96 TDV 2024

**(ಎಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:953ಕ್ಕೆ ಅನುಬಂಧ

## ಬೀದರ್ ಜಿಲ್ಲೆಯಲ್ಲಿ ಕೇಂದ್ರ ಮತ್ತು ರಾಜ್ಯ ಪುರಾತತ್ವ ಇಲಾಖೆಯಡಿ ಬರುವ ಐತಿಹಾಸಿಕ ಸ್ಮಾರಕಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ 2016-17ನೇ ಸಾಲಿನಿಂದ ಈವರೆಗೂ ಕೈಗೊಂಡಿರುವ ಮೂಲ ಸೌಕರ್ಯಗಳ ಅಭಿವೃದ್ಧಿ ಕಾಮಗಾರಿಗಳ ವಿವರ

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಕಾಮಗಾರಿಯ ಹೆಸರು | ಮಂಜೂರಾದ ವರ್ಷ | ಅಂದಾಜು ಮೊತ್ತ | ಈವರೆಗೂ ಬಿಡುಗಡೆ ಮಾಡಿರುವ ಅನುದಾನ | ಷರಾ |
|---|---|---|---|---|---|
| 1 | 2 | 3 | 4 | 5 | 6 |
| | **ಬೀದರ್ ಜಿಲ್ಲೆ** | | | | |
| | **ಬೀದರ್ ತಾಲ್ಲೂಕು** | | | | |
| 1 | ಬೀದರ್ ಕೋಟೆ ಪ್ರದೇಶದಲ್ಲಿ ಪ್ರವಾಸಿ ಸೌಲಭ್ಯಗಳ ಅಭಿವೃದ್ಧಿ ಕಾಮಗಾರಿ | 2015-16 ಬಂಡವಾಳ ವೆಚ್ಚಗಳು | 252.43 | 252.43 | ಇಂಟರ್ಪ್ರಿಟೇಶನ್ ಸೆಂಟ್‌ರನಲ್ಲಿ ಫ್ಲೋರಿಂಗ್ ಮತ್ತು ಪೇಂಟಿಂಗ್ ಕೆಲಸ ಮುಕ್ತಾಯದ ಹಂತದಲ್ಲಿದೆ. ಬಾಕಿ ಕಾಮಗಾರಿ ಕೈಗೊಳ್ಳಬೇಕಿದೆ. |
| | **ಬಸವಕಲ್ಯಾಣ ತಾಲ್ಲೂಕು** | | | | |
| 2 | ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನಲ್ಲಿರುವ ಕೋಟೆ ಸಂರಕ್ಷಣೆ ಅಭಿವೃದ್ಧಿ | 2016-17 | 200.00 | 50.00 | ಕೋಟೆಯ ಗೋಡೆಯ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. |
| | **ಭಾಲ್ಕಿ ತಾಲ್ಲೂಕು** | | | | |
| 3 | ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನಲ್ಲಿರುವ ಕೋಟೆ ಸಂರಕ್ಷಣೆ ಅಭಿವೃದ್ಧಿ | 2016-17 | 200.00 | 10.00 | ಕಾಮಗಾರಿ ಪ್ರಗತಿಯಲ್ಲಿದೆ. |
| 4 | ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಭಾತಂಬ್ರ ಕೋಟೆ ಸಂರಕ್ಷಣೆ ಅಭಿವೃದ್ಧಿ | 2016-17 | 200.00 | 10.00 | ಕಾಮಗಾರಿ ಪ್ರಗತಿಯಲ್ಲಿದೆ. |
| | **ಒಟ್ಟು** | | **852.43** | **322.43** | |